# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಗ್ರಾಮೀಣ ಕುಡಿಯುವ ನೀರು ನೈರ್ಮಲ್ಯ ಇಲಾಖೆಯಲ್ಲಿ ಗ್ರಾಮೀಣ ಕುಡಿಯುವ ನೀರಿನ ಕಾಮಗಾರಿಗಳ ಟೆಂಡರ್‌ಗಳನ್ನು ಪರಿಶೀಲಿಸಲು ಚಾಲ್ತಿಯಲ್ಲಿರುವ ಟೆಂಡರ್ ಪರಿಶೀಲನಾ / ಪರಾಮರ್ಶೆ ಸಮಿತಿ ಪುನರ್ರಚಿಸುವ ಕುರಿತು.

**ಓದಲಾಗಿದೆ:** ಸರ್ಕಾರದ ಆದೇಶ ಸಂ:ಗ್ರಾಅಪ 10 ಗ್ರಾನೀಸ(2)10 ದಿನಾಂಕ:05.04.2010.

--

**ಪೀಠಿಕೆ:**

ಮೇಲೆ ಓದಲಾದ ಆದೇಶದಲ್ಲಿ ಕುಡಿಯುವ ನೀರಿನ ಯೋಜನೆಗಳಿಗೆ ಸಂಬಂಧಿಸಿದಂತೆ, KTPP ಕಾಯ್ದೆಯನ್ವಯ ಸ್ವೀಕೃತಿ ಟೆಂಡರ್ ಪ್ರಸ್ತಾವನೆಗಳನ್ನು ಪರಿಶೀಲಿಸಿ, ಆರ್ಥಿಕ ಶಿಸ್ತು ಕಾಯ್ದುಕೊಳ್ಳಲು ಟೆಂಡರ್ ಪರಿಶೀಲನಾ / ಪರಾಮರ್ಶೆ ಸಮಿತಿ ರಚಿಸಲಾಗಿತ್ತು. ಪ್ರಸ್ತುತ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಸೃಜನೆಯಾಗಿರುವುದರಿಂದ ಗ್ರಾಮೀಣ ಕುಡಿಯುವ ನೀರು ಸರಬರಾಜು ಯೋಜನೆಗಳನ್ನು ಟೆಂಡರ್ ಮುಖಾಂತರ ಕಾಮಗಾರಿಗಳನ್ನು ಅನುಷ್ಠಾನಗೊಳಿಸುವ ಸಂದರ್ಭದಲ್ಲಿ, ಹೆಚ್ಚುವರಿ ದರ ನಮೂದಿಸಿದ ಗುತ್ತಿಗೆದಾರರೊಂದಿಗೆ ಸಮಾಲೋಚಿಸಿ, ಟೆಂಡರ್ ಪ್ರಕ್ರಿಯೆ (ಆರ್ಥಿಕ ಮತ್ತು ತಾಂತ್ರಿಕ) ಅಂತ್ಯಗೊಳಿಸಲು ಚಾಲ್ತಿಯಲ್ಲಿರುವ ಟೆಂಡರ್ ಪರಿಶೀಲನಾ / ಪರಾಮರ್ಶೆ ಸಮಿತಿ ಪುನರ್ರಚಿಸುವ ಅಗತ್ಯತೆಯಿದೆ ಎಂದು ನಿರ್ಧರಿಸಲಾಗಿದೆ. ಆದ್ದರಿಂದ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 43 ಗ್ರಾನೀಸ(5) 2016 ಬೆಂಗಳೂರು, ದಿನಾಂಕ:22.07.2016.**

ಪೀಠಿಕೆಯಲ್ಲಿನ ಪ್ರಸ್ತಾವನೆಯನ್ನು ಪರಿಶೀಲಿಸಿ, ಗ್ರಾಮೀಣ ಕುಡಿಯುವ ನೀರಿನ ಕಾಮಗಾರಿಗಳ ಬಾಬ್ತಿನ ಟೆಂಡರ್ ಪ್ರಕ್ರಿಯೆ(ಆರ್ಥಿಕ ಮತ್ತು ತಾಂತ್ರಿಕ)ಯನ್ನು ಚಾಲ್ತಿಯಲ್ಲಿರುವ KTPP ಕಾಯ್ದೆ ವ್ಯಾಪ್ತಿಯೊಳಗೆ ನಡೆಸಿ, ಕಾರ್ಯಾದೇಶ ನೀಡುವ ಕುರಿತು ನಿರ್ಧರಿಸಲು / ಸರ್ಕಾರಕ್ಕೆ ಶಿಫಾರಸ್ಸು ಮಾಡಲು ಕೆಳಕಂಡಂತೆ ಟೆಂಡರ್ ಪರಿಶೀಲನಾ / ಪರಾಮರ್ಶೆ ಸಮಿತಿ ಪುನರ್ರಚಿಸಲು ಸರ್ಕಾರವು ಹರ್ಷಿಸುತ್ತದೆ.

| ಕ್ರ.ಸಂ | ಅಧಿಕಾರಿ | ಪದನಾಮ |
|---|---|---|
| 1 | ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ | ಅಧ್ಯಕ್ಷರು |
| 2 | ನಿರ್ದೇಶಕರು, ವ್ಯಾಸೋ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ | ಸದಸ್ಯರು |
| 3 | ಮುಖ್ಯ ಲೆಕ್ಕಾಧಿಕಾರಿ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ | ಸದಸ್ಯರು |
| 4 | ಅಧೀಕ್ಷಕ ಅಭಿಯಂತರರು, ಟೆಂಡರ್‌ಗೆ ಸಂಬಂಧಿಸಿದ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗ | ಸದಸ್ಯರು |
| 5 | ಅಧೀಕ್ಷಕ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಕೇಂದ್ರ ಕಛೇರಿ | ಸದಸ್ಯ ಕಾರ್ಯದರ್ಶಿ |

2. ಮೇಲ್ಕಂಡ ಸಮಿತಿಯು ತಕ್ಷಣದಿಂದ ಹಾಗೂ ಮುಂದಿನ ಆದೇಶದವರೆಗೆ ಜಾರಿಯಲ್ಲಿರುತ್ತದೆ. ಸದರಿ ಸಮಿತಿಯು, KTPP ಕಾಯ್ದೆಯನ್ವಯ ಸ್ವೀಕೃತಿಯಾದ ಟೆಂಡರ್ ಪ್ರಸ್ತಾವನೆಗಳಿಗೆ ಸಂಬಂಧಿಸಿದಂತೆ ಮಾತ್ರ ಕಾರ್ಯ ನಿರ್ವಹಿಸತಕ್ಕದ್ದು. ಟೆಂಡರ್ ಪರಿಶೀಲನಾ / ಪರಾಮರ್ಶೆ ಸಮಿತಿಯ ಕಾರ್ಯವ್ಯಾಪ್ತಿಯು ಆರ್ಥಿಕ ಇಲಾಖೆಯು ಹೊರಡಿಸಿರುವ ಆರ್ಥಿಕ ಅಧಿಕಾರ ಪ್ರತ್ಯಾಯೋಜನೆ ಆದೇಶ ವ್ಯಾಪ್ತಿಯಲ್ಲಿರತಕ್ಕದ್ದು.

3. ಈ ಆದೇಶವು ತತ್ಸಂಬಂಧದ ಟೆಂಡರ್ ಪ್ರಕ್ರಿಯೆಗೆ ಸಂಬಂಧಿಸಿದಂತೆ, ಸರ್ಕಾರವು ಕಾಲಕಾಲಕ್ಕೆ ಹೊರಡಿಸುವ ಆದೇಶ / ಬದಲಾವಣೆಗಳು ಮತ್ತು ಲಿಖಿತ ಸೂಚನೆಗಳಿಗೆ ಬದ್ಧವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಬಿ. ಕೃಷ್ಣಪ್ಪ)
ಸರ್ಕಾರದ ಉಪ ಕಾರ್ಯದರ್ಶಿ(ಗ್ರಾನೀಸ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಪ್ರತಿಗಳು:**

1. ಮಹಾಲೇಖಪಾಲರು (ಲೆಕ್ಕಪತ್ರ) ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಎಯು-1) ಕರ್ನಾಟಕ, ಬೆಂಗಳೂರು.
3. ಮಹಾಲೇಖಪಾಲರು (ಎಯು-2) ಕರ್ನಾಟಕ, ಬೆಂಗಳೂರು.
4. ಉಪ ಮಹಾಲೇಖಪಾಲರು, ಮಹಾಲೇಖಪಾಲರು (ಎಯು-1) ರವರ ಶಾಖಾ ಕಛೇರಿ, ಕಾಲೇಜು ರಸ್ತೆ, ಧಾರವಾಡ.
5. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
6. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರ ಆಪ್ತ ಕಾರ್ಯದರ್ಶಿ,ವಿಧಾನಸೌಧ, ಬೆಂ.
7. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ನಗರಾಭಿವೃದ್ಧಿ ಇಲಾಖೆ, ವಿಕಾಸ ಸೌಧ ಬೆಂಗಳೂರು.
8. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಯೋಜನಾ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು.
9. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ / ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ವಿಧಾನಸೌಧ / ವಿಕಾಸಸೌಧ ಬೆಂಗಳೂರು.
10. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ, ವಿಕಾಸ ಸೌಧ ಬೆಂಗಳೂರು.
11. ವಿಶೇಷಾಧಿಕಾರಿ (ಜಿಪಂ) ಹಾಗೂ ಸರ್ಕಾರದ ಪದನಿಮಿತ್ತ ಉಪಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ಬೆಂ-09.
12. ಸರ್ಕಾರದ ಅಧೀನ ಕಾರ್ಯದರ್ಶಿ, ವೆಚ್ಚ (6) (ಜಿಪಂ) ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
13. ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, 1ನೇ ಮಹಡಿ, ಕಾವೇರಿಭವನ, ಬೆಂ-9.
14. ನಿರ್ದೇಶಕರು, ವ್ಯಾಸೋ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, 2ನೇ ಮಹಡಿ, ಕಾವೇರಿಭವನ, ಬೆಂ-9.
15. ಮುಖ್ಯ ಲೆಕ್ಕಾಧಿಕಾರಿ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, 2ನೇ ಮಹಡಿ, ಕಾವೇರಿಭವನ, ಬೆಂ-9.
16. ಅಧೀಕ್ಷಕ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, 2ನೇ ಮಹಡಿ, ಕಾವೇರಿಭವನ, ಬೆಂ-9.
17. ಅಧೀಕ್ಷಕ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗ, ಬೆಂಗಳೂರು, ಮೈಸೂರು, ಗುಲ್ಬರ್ಗಾ ಮತ್ತು ಬೆಳಗಾಂ.
18. ನಿರ್ದೇಶಕರು, ಶ್ರೀ ಅಬ್ದುಲ್ ನಜೀರ್ ಸಾಬ್‌ರವರ ಗ್ರಾಮೀಣಾಭಿವೃದ್ಧಿ ರಾಜ್ಯ ಸಂಸ್ಥೆ, ಲಲಿತ್ ಮಹಲ್ ರಸ್ತೆ, ಮೈಸೂರು.
19. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ರವರ ಆಪ್ತ ಕಾರ್ಯದರ್ಶಿ.
20. ಆಯುಕ್ತರು, RDWSD / ಆಂತರಿಕ ಆರ್ಥಿಕ ಸಲಹೆಗಾರರು / ಇವರುಗಳ ಆಪ್ತ ಸಹಾಯಕರು.
21. ಮ್ಯಾನೇಜರ್, ಸಿಂಡಿಕೇಟ್ ಬ್ಯಾಂಕ್, BWSSB ಬ್ರ್ಯಾಂಚ್, ರಾಜದ್ದೂತ್ ಕಾಂಪ್ಲೆಕ್ಸ್, ಅವೆನ್ಯೂ ರಸ್ತೆ, ಬೆಂಗಳೂರು.
22. ಮುಖ್ಯ ಸಂಪಾದಕರು ಮತ್ತು ಸಂಪರ್ಕಾಧಿಕಾರಿ "ಕರ್ನಾಟಕ ವಿಕಾಸ" ಗ್ರಾಅಪಂ.ರಾಜ್ ಇಲಾಖೆ, ಬೆಂಗಳೂರು.
23. ಶಾಖಾಧಿಕಾರಿ, ರವಾನೆ ಮತ್ತು ಸ್ವೀಕೃತಿ ಶಾಖೆ, ಗ್ರಾಅಪಂ.ರಾಜ್ ಇಲಾಖೆ (ವಾರದ ಗೆಜೆಟ್‌ನಲ್ಲಿ ಪ್ರಕಟಿಸಲು 5 ಪ್ರತಿಗಳು).
24. ರಾಜ್ಯ ಪತ್ರಾಗಾರ ಇಲಾಖೆ (ಬಿಡಿ ಪ್ರತಿ ಶಾಖೆ).
25. ಗ್ರಾಅಪಂ.ರಾಜ್ ಇಲಾಖೆಯ ಮಾಹಿತಿ ಕೇಂದ್ರ (10 ಪ್ರತಿಗಳು).
26. ಶಾಖಾ ರಕ್ಷಾ ಕಡತ ಹೆಚ್ಚುವರಿ ಪ್ರತಿಗಳು.